JANUARY 23, 2026

AKASHAVANI - DHARWAD

PRADESH SAMACHARA (KANNADA) 12.00 P.M.

<><><>

ಆಕಾಶವಾಣಿ

ಪ್ರದೇಶ ಸಮಾಚಾರ

<><><>

ರಾಜ್ಯದ 16 ನೇ ವಿಧಾನಸಭೆಯ, 9 ನೇ ಅಧಿವೇಶನದ, ಎರಡನೇ ದಿನದ ಕಲಾಪ ಸಭಾಧ್ಯಕ್ಷರಾದ ಯು.ಟಿ ಖಾದರ ಅವರ ಅಧ್ಯಕ್ಷತೆಯಲ್ಲಿ ಇಂದು ಆರಂಭಗೊಂಡಿದೆ, ರಾಜ್ಯಪಾಲರ ಭಾಷಣಕ್ಕೆ ಸಂಬಂಧಪಟ್ಟಂತೆ, ವಂದನಾರ್ಪಣೆ ಪ್ರಸ್ತಾವ ಸಲ್ಲಿಕೆಯಾಗಲಿದೆ. ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅಧ್ಯಕ್ಷತೆಯಲ್ಲಿ, ಎರಡನೇ ದಿನದ ಪರಿಷತ್ ಕಲಾಪ ಆರಂಭಗೊಂಡಿದೆ. ಸದನದಲ್ಲಿ ಶಾಸಕ ಐವನ್ ಡಿಸೋಜಾ, ರಾಜ್ಯಪಾಲರ ಭಾಷಣದ ಮೇಲೆ ವಂದನಾರ್ಪಣೆ ಪ್ರಸ್ತಾವವನ್ನು ಸೂಚಿಸಲಿದ್ದು, ಶಾಸಕ ರಮೇಶ್ ಅನುಮೋದಿಸಲಿದ್ದಾರೆ.

<><><>

ಪ್ರಧಾನಮಂತ್ರಿ ಪೋಷಣ್ ಅಭಿಯಾನ, ಮಾತೃ ವಂದನಾ ಯೋಜನೆ ಹಾಗೂ ಅನ್ನಭಾಗ್ಯದಂತಹ, ಮಹಿಳೆ ಮತ್ತು ಮಕ್ಕಳಿಗೆ ಪೌಷ್ಟಿಕಾಹಾರ ಒದಗಿಸುವ ಕಾರ್ಯವನ್ನು, ಬದ್ಧತೆಯಿಂದ ನಿರ್ವಹಿಸುವಂತೆ, ರಾಜ್ಯ ಆಹಾರ ಆಯೋಗದ ಅಧ್ಯಕ್ಷ ಎಚ್.ಕೃಷ್ಣ, ಸೂಚಿಸಿದ್ದಾರೆ. ಶಿವಮೊಗ್ಗದ ಜಿಲ್ಲಾ ಪಂಚಾಯಿತಿ ಸಭಾಂಗಣದಲ್ಲಿ, ಅವರು ಅಧಿಕಾರಿಗಳ ಸಭೆ ನಡೆಸಿದರು. ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆ, ಜನತೆಯ ಆಹಾರ ಹಕ್ಕಿಗೆ ಕಾನೂನಾತ್ಮಕ ಭದ್ರತೆ ನೀಡಿದೆ. ಅಪೌಷ್ಟಿಕತೆಯಿಂದ ಬಳಲುವ ಗರ್ಭಿಣಿಯರು, ಬಾಣಂತಿಯರು, ಅಂಗನವಾಡಿ ಮಕ್ಕಳಿಗೆ ಗುಣಮಟ್ಟದ ಪೌಷ್ಟಿಕ ಆಹಾರ, ಖಾತ್ರಿ ಪಡಿಸುವಂತೆ, ಆದೇಶಿಸಿದರು.

<><><>

ಜಾಗತಿಕ ಮೆಚ್ಚುಗೆ ಪಡೆದ ನಗರವಾಗಿ ಬೆಂಗಳೂರು ಹೊರಹೊಮ್ಮಿದೆ ಹಾಗೂ ವಿಶ್ವದ ವಿವಿಧ ವಲಯಗಳ ಕಂಪೆನಿಗಳು ಕರ್ನಾಟಕದಲ್ಲಿ ಹೂಡಿಕೆ ಮಾಡಲು ತೀವ್ರ ಆಸಕ್ತಿ ತೋರಿಸಿವೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ ತಮ್ಮ ಎಕ್ಸ್ ಖಾತೆ ಮೂಲಕ ತಿಳಿಸಿದ್ದಾರೆ. ದಾವೋಸ್ ನಲ್ಲಿ ಆಯೋಜಿತ, ವರ್ಲ್ಡ್ ಎಕನಾಮಿಕ್ ಫಾರಂ, ಆರ್ಥಿಕ ಶೃಂಗ ಸಭೆಯಲ್ಲಿ ಪಾಲ್ಗೊಂಡಿರುವ ಬಗ್ಗೆ ಮಾಹಿತಿ ಹಂಚಿಕೊಂಡಿರುವ ಅವರು, ಹೆಚ್ಚಿನ ವಿದೇಶಿ ಹೂಡಿಕೆಯನ್ನು ಆಕರ್ಷಿಸುವ ಹಾಗೂ ಸುಸ್ಥಿರ ಬೆಳವಣಿಗೆಗೆ ಕಾರಣವಾಗುವ ದೃಢವಾದ, ಪಾರದರ್ಶಕ ಮತ್ತು ಹೂಡಿಕೆದಾರ ಸ್ನೇಹಿ ಪರಿಸರ ವ್ಯವಸ್ಥೆಯ ಬದ್ಧತೆಯನ್ನು ವ್ಯಕ್ತಪಡಿಸಿರುವುದಾಗಿ ತಿಳಿಸಿದರು.

<><><>

ಡಿ.ಕೆ ಶಿವಕುಮಾರ ಧ್ವನಿ –37 ಸೆಕೆಂದುಗಳು

<><><>

ಭಾರತ ಜಾಗತಿಕ ಕ್ರೀಡಾ ಶಕ್ತಿಯಾಗಲಿದೆ, 2047 ರ ವೇಳಗೆ ಪ್ರಮುಖ ಕ್ರೀಡಾ ರಾಷ್ಟ್ರವಾಗಿ, ವಿಶ್ವದ ಅಗ್ರ 5 ದೇಶಗಳಲ್ಲಿ ಸ್ಥಾನ ಪಡೆಯಲಿದೆ ಎಂದು ರಾಜ್ಯಪಾಲ ಥಾವರಚಂದ್ ಗೆಹ್ಲೋಟ್ ಹೇಳಿದರು. ತುಮಕೂರಿನ, ಮಹಾತ್ಮಗಾಂಧಿ ಕ್ರೀಡಾಂಗಣದಲ್ಲಿ ಆಯೋಜಿತ, ಕರ್ನಾಟಕ ಒಲಿಂಪಿಕ್ಸ್ ಕ್ರೀಡಾಕೂಟ 2025–26 ರ ಸಮಾರೋಪ ಸಮಾರಂಭದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು. ಪ್ರಧಾನಮಂತ್ರಿ ಅವರ ನೇತೃತ್ವದಲ್ಲಿ ಫಿಟ್ ಇಂಡಿಯಾ, ಖೇಲೋ ಇಂಡಿಯಾ ಹಾಗೂ ವಿಕಸಿತ ಭಾರತದಂತಹ ಅಭಿಯಾನಗಳು, ಕ್ರೀಡೆಗಳನ್ನು ಸಾಮೂಹಿಕ ಆಂದೋಲನವಾಗಿ ಪರಿವರ್ತಿಸಿವೆ ಎಂದರು. ಕೊನೆ ದಿನ ಜರುಗಿದ ಖೊ–ಖೊ ಪಂದ್ಯಾವಳಿಯ ಪುರುಷರ ವಿಭಾಗದಲ್ಲಿ ಬೆಂಗಳೂರು ನಗರ ತಂಡ, ಮಹಿಳೆಯರ ವಿಭಾಗದಲ್ಲಿ ಮೈಸೂರು ತಂಡ ಚಿನ್ನದ ಪದಕ ಜಯಿಸಿದವು. ಪುರುಷರ ಫುಟ್ಬಾಲ್ ಪಂದ್ಯಾವಳಿಯ ಫೈನಲ್ಸ್ ನಲ್ಲಿ ಬೆಳಗಾವಿ ತಂಡ, ಮೈಸೂರು ತಂಡವನ್ನು ಪೆನಾಲ್ಟಿ ಶೂಟೌಟ್, 5–3 ಗೋಲುಗಳ ಅಂತರದಲ್ಲಿ ಮಣಿಸಿ ಜಯ ಗಳಿಸಿತು.

<><><>

ಧಾರವಾಡ ಮಹಾನಗರ ವ್ಯಾಪ್ತಿಯ, ಸಂಸದ ಕ್ರೀಡಾ ಮಹೋತ್ಸವ 2025–26 ಕ್ಕೆ ಇಂದು ಬೆಳಗ್ಗೆ ನಗರದ, ಕರ್ನಾಟಕ ಕಾಲೇಜು ಮೈದಾನದಲ್ಲಿ ಚಾಲನೆ ನೀಡಲಾಯಿತು.

<><><>

ಮುಂದಿನ ತಿಂಗಳು, ಫೆಬ್ರುವರಿ 13 ರಿಂದ, ಮೂರು ದಿನಗಳ ಕಾಲ ನಡೆಯಲಿರುವ ವಿಶ್ವವಿಖ್ಯಾತ ಹಂಪಿ ಉತ್ಸವವನ್ನು ಯಶಸ್ವಿಯಾಗಿ ಆಯೋಜಿಸಲು, 21 ಉಪ ಸಮಿತಿಗಳನ್ನು ರಚಿಸಲಾಗಿದೆ ಎಂದು ವಿಜಯನಗರ ಜಿಲ್ಲಾಧಿಕಾರಿ ಕವಿತಾ ಎಸ್.ಮನ್ನಿಕೇರಿ ತಿಳಿಸಿದ್ದಾರೆ. ಹಂಪಿ ಉತ್ಸವದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಉತ್ಸವದ ಪೂರ್ವಭಾವಿ ಸಿದ್ಧತೆಗಳು ನಡೆಯುತ್ತಿವೆ ಎಂದು ತಿಳಿಸಿದರು.

<><><>

ಧಾರವಾಡ ಕೃಷಿ ವಿಶ್ವವಿದ್ಯಾಲಯದ, ವಿಸ್ತರಣಾ ನಿರ್ದೇಶನಾಲಯ 'ಸಮೇತಿ' ವತಿಯಿಂದ, ಕೃಷೋನ್ನತಿ, ಕೃಷಿ ವಿಸ್ತರಣೆ ಉಪ ಅಭಿಯಾನ – ಆತ್ಮಾ ಯೋಜನೆಯಡಿ, ಕಿತ್ತೂರು ಹಾಗೂ ಕಲ್ಯಾಣ ಕರ್ನಾಟಕ ಭಾಗದ 14 ಜಿಲ್ಲೆಗಳ ಸಿಬ್ಬಂದಿಗೆ, ವಾರ್ಷಿಕ ತರಬೇತಿ ಯೋಜನಾ ಕಾರ್ಯಾಗಾರ ಆಯೋಜಿಸಿತ್ತು. ವಿಸ್ತರಣಾ ನಿರ್ದೇಶಕ ಎಂ.ಬಿ.ಮಂಜುನಾಥ, ಕಾರ್ಯಾಗಾರ ಉದ್ಘಾಟಿಸಿ, ಆತ್ಮಾ ಸಿಬ್ಬಂದಿ ಕೃಷಿ ಸಂಬಂಧಿ ನೂತನ ತಂತ್ರಾಂಶ ಮತ್ತು ತಂತ್ರಜ್ಞಾನಗಳ ಬಳಕೆ ಕುರಿತು ಮಾಹಿತಿ ಪಡೆದು, ರೈತರಿಗೆ ಸಕಾಲಿಕವಾಗಿ ಸೂಕ್ತ ವಿಷಯಗಳನ್ನು ತಲುಪಿಸಲು, ಎರಡು ದಿನಗಳ ಈ ಕಾರ್ಯಾಗಾರ ಸಹಕಾರಿಯಾಗಲಿದೆ ಎಂದರು. ಒಟ್ಟು 34 ಜನ ಆತ್ಮಾ ಸಿಬ್ಬಂದಿ ಕಾರ್ಯಾಗಾರದಲ್ಲಿ ಭಾಗವಹಿಸಿದ್ದಾಗಿ, ತರಬೇತಿ ಸಂಯೋಜಕ, ಎಸ್.ಎನ್.ಜಾಧವ ತಿಳಿಸಿದ್ದಾರೆ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ

<><><>